**ದಿನಾಂಕ 24.03.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಡಿಸ್ಚಾರ್ಜ್ ಸಮರಿಯನ್ನು **ನಿಪಿ 6** ಎಂದು, ನ್ಯಾಯಾಲಯಕ್ಕೆ ನೀಡಿರುವ ನಿವೇದನೆಯ ಧೃಡಿಕೃತ ಪ್ರತಿಯನ್ನು **ನಿಪಿ 7** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 8** ಎಂದು, ಪೊಲೀಸರು ಆಸ್ಪತ್ರೆಗೆ ನೀಡಿರುವ ಪತ್ರ ಮತ್ತು ಅದಕ್ಕೆ ನೀಡಲಾದ ಉತ್ತರದ ಧೃಡಿಕೃತ ಪ್ರತಿಗಳನ್ನು ಒಟ್ಟಾಗಿ **ನಿಪಿ 9** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 10** ಎಂದು, ಲ್ಯಾಬ್ ವರದಿಗಳನ್ನು **ನಿಪಿ 11** ಎಂದು, ಛಾಯಾ ಚಿತ್ರಗಳನ್ನು **ನಿಪಿ 12** ಎಂದು, ಸಿಡಿಯನ್ನು **ನಿಪಿ 13** ಎಂದು, ಆಸ್ಪತ್ರೆಯವರು ನೀಡಿರುವ ಪತ್ರವನ್ನು **ನಿಪಿ 14** ಎಂದು, ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಯನ್ನು **ನಿಪಿ 15** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಅಪಘಾತ ಆಪಾದಿತ ವಾಹನದಿಂದ ಉಂಟಾಗಿಲ್ಲ, ಬೇರೆ ಯಾವುದೋ ಒಂದು ವಾಹನದಿಂದ ಸಂಭವಿಸಿದೆ ಎಂದರೆ ಸರಿಯಲ್ಲ. ಅಪಘಾತ ಕೆಎ-04-ಕೆವೈ-7908 ಸಂಖ್ಯೆಯ ವಾಹನದಿಂದ ಸಂಭವಿಸಿದೆ ಎಂದರೆ ಸರಿಯಲ್ಲ. ಸದರಿ ವಾಹನಕ್ಕೆ ವಿಮೆ ಮತ್ತು ಚಾಲಕನಿಗೆ

ಪರವಾನಗಿ ಇಲ್ಲದ ಕಾರಣ ಆಪಾದಿತ ವಾಹನದ ಮಾಲೀಕರ ಪರಿಚಯ ಇರುವ ಕಾರಣ ಅವರೊಂದಿಗೆ ಮತ್ತು ಪೊಲೀಸರೊಂದಿಗೆ ಶಾಮೀಲಾಗಿ ಸುಳ್ಳು ದೂರು ನೀಡಿರುತ್ತೇವೆ ಎಂದರೆ ಸರಿಯಲ್ಲ. ಆಪಾದಿತ ವಾಹನ ಅಪಘಾತದಲ್ಲಿ ಭಾಗಿಯಾಗಿಲ್ಲ ಮತ್ತು ಅದರ ಚಾಲಕನ ಯಾವುದೇ ತಪ್ಪು ಇಲ್ಲ ಎಂದರೆ ಸರಿಯಲ್ಲ. ಆಪಾದಿತ ವಾಹನದ ಚಾಲಕ ಅಥವಾ ಮಾಲೀಕರನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ. ಅಪಘಾತ ನನ್ನ ಮಗನ ತಪ್ಪಿ ನಿಂದ ಸಂಭವಿಸಿರುತ್ತದೆ ಎಂದರೆ ಸರಿಯಲ್ಲ. ನನ್ನ ಮಗ ಯಾವುದೇ ಸೂಚನೆ ಇಲ್ಲದೇ ಇದ್ದರೂ ಸಹ ಅವಸರದಿಂದ ವಾಹನ ಚಾಲನೆ ಮಾಡಿಕೊಂಡು ರಸ್ತೆ ದಾಟಲು ಪ್ರಯತ್ನ ಮಾಡಿದ ಕಾರಣ ಅಪಘಾತವಾಗಿರುತ್ತದೆ ಎಂದರೆ ಸರಿ. (ಸದರಿ ಪ್ರಶ್ನೆಯನ್ನು ಸಾಕ್ಷಿದಾರರಿಗೆ ಎರಡರಿಂದ ಮೂರು ಬಾರಿ ವಿವರಿಸಿ ಹೇಳಲಾಗಿದ್ದು, ನಂತರದಲ್ಲಿ ನೀಡಿದ ಉತ್ತರವನ್ನು ದಾಖಲಿಸಿಕೊಳ್ಳಲಾಗಿದೆ). ನನ್ನ ಮಗ ನ್ಯಾಯಾಲಯಕ್ಕೆ ಬಂದು ಸಾಕ್ಷ್ಯ ನೀಡಲು ಸಾಧ್ಯವಿಲ್ಲ ಎಂದು ವೈದ್ಯರನ್ನು ಕರೆಯಿಸಿ ವಿಚಾರಣೆಗೆ ಒಳಪಡಿಸಬೇಕಿತ್ತು ಎಂದರೆ ಸಾಕ್ಷಿಯು ಆತನಿಗೆ ಸಾಕ್ಷ್ಯ ನೀಡಲು ಸಾಧ್ಯವಿಲ್ಲ ಎಂದು ನುಡಿಯುತ್ತಾರೆ. ನನ್ನ ಮಗನಿಗೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮಗನ ತಲೆಗೆ ಯಾವುದೇ ಪೆಟ್ಟಾಗಿರುವುದಿಲ್ಲ ಎಂದರೆ ಸರಿಯಲ್ಲ.

ಚಿಕಿತ್ಸೆಗೆ ನಾವು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮಗನ ಚಿಕಿತ್ಸೆಯ ವೆಚ್ಚ ಆರೋಗ್ಯ ವಿಮಾ ಸೌಲಭ್ಯದಿಂದ ಮರುಪಾವತಿಯಾಗಿದೆ ಎಂದರೆ ಸರಿಯಲ್ಲ. ಟ್ಯಾಕ್ಸ್ ಇನ್ವಾಯ್ಸ್ ಗಳನ್ನು ಬಿಲ್ಲುಗಳೆಂದು ಬಿಂಬಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಮೂಲ ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳನ್ನು ಆಸ್ಪತ್ರೆಯವರು ನೀಡಿಲ್ಲ ಎಂದರೆ ಸರಿಯಲ್ಲ. ಹಣ ಪಾವತಿ ರಶೀದಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳಿಗೆ ಸಂಬಂಧಿಸಿದಂತೆ ವೈದ್ಯರ ಸಲಹಾ ಚೀಟಿಗಳನ್ನು ಹಾಜರುಪಡಿಸಿಲ್ಲ ಎಂದರೆ

ಸರಿ. ಆಸ್ಪತ್ರೆಯ ಸಂಬಂಧಪಟ್ಟವರನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ ಎಂದರೆ ಸರಿ. ಪ್ರಮಾಣ ಪತ್ರದ ಖಂಡಿಕೆ 4 ಮತ್ತು 5 ರಲ್ಲಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ. ನನ್ನ ಮಗನಿಗೆ ಆಗಿರುವ ಗಾಯಗಳು ಅಪಘಾತದಿಂದ ಉಂಟಾಗಿಲ್ಲ ಎಂದರೆ ಸರಿಯಲ್ಲ. ನನ್ನ ಮಗನಿಗೆ ಯಾವುದೇ ರೀತಿಯ ನ್ಯೂನ್ಯತೆ ಉಂಟಾಗಿಲ್ಲ ಎಂದರೆ ಸರಿಯಲ್ಲ. ನನ್ನ ಮಗನನ್ನು ನೋಡಿಕೊಳ್ಳಲು ಯಾವುದೇ ಪರಿಚಾಕರನ್ನು ನೇಮಕ ಮಾಡಿಕೊಂಡಿಲ್ಲ ಮತ್ತು ಅದಕ್ಕೆ ಯಾವುದೇ ವೆಚ್ಚ ಆಗಿಲ್ಲ ಎಂದರೆ ಸರಿಯಲ್ಲ.

ನನ್ನ ಮಗನಿಗೆ 32 ಕ್ಕಿಂತಲೂ ಹೆಚ್ಚಿನ ವಯಸ್ಸು ಆಗಿದೆ ಎಂದರೆ ಸರಿಯಲ್ಲ. ನನ್ನ ಮಗನಿಗೆ ವಿವಾಹ ಆಗಿಲ್ಲ. ನನ್ನ ಮಗ ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ಆತನಿಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಮಗ ಸಾಕ್ಷ್ಯ ನುಡಿಯಲು ಸಾಮರ್ಥ್ಯ ಇದ್ದರೂ ಸಹ ಪರಿಹಾರ ಪಡೆಯುವ ಉದ್ದೇಶದಿಂದ ಮತ್ತು ಸತ್ಯಾಂಶ ಮರೆಮಾಚಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ವೈದ್ಯರು, ಪೊಲೀಸರು ಮತ್ತು ಆಪಾದಿತ ವಾಹನದ ಮಾಲೀಲಕರೊಂದಿಗೆ ಶಾಮೀಲಾಗಿ ಸೃಷ್ಟಿತ ದಾಖಲಾತಿಗಳ ಆಧಾರದ ಮೇರೆಗೆ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2ನೇ ಎದುರುದಾರರ ಪರ ಮಾನ್ಯ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**